# ಶ್ರೀ ಕೆ.ಹರೀಶ್ ಕುಮಾರ್, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಹೇಳಿಕೆ

---

**ಸೂಚನೆ:**

**"ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ಭಾಗದಲ್ಲಿ ಮೀನುಗಾರರ ಸರ್ವತೋಮುಖ ಅಭಿವೃದ್ಧಿಗಾಗಿ ನಿಗದಿತ ಕಾಲಮಿತಿಯೊಳಗೆ ಯೋಜನೆಗಳನ್ನು ಜಾರಿಗೊಳಿಸುವ ಕುರಿತು"**

**ಹೇಳಿಕೆ:**

ದಕ್ಷಿಣ ಕನ್ನಡ ಜಿಲ್ಲೆಯು ಕರ್ನಾಟಕದ 3 ಕರಾವಳಿ ಜಿಲ್ಲೆಗಳಲ್ಲಿ ಒಂದಾಗಿರುತ್ತದೆ. ದಕ್ಷಿಣ ಕನ್ನಡ ಜಿಲ್ಲೆಯು 42 ಕಿ.ಮೀ. ಕರಾವಳಿ ತೀರ ಪ್ರದೇಶ ಹೊಂದಿದ್ದು, ಮೀನುಗಾರಿಕೆ ಒಂದು ಪ್ರಮುಖವಾದ ಉದ್ಯಮವಾಗಿರುತ್ತದೆ. ಮೀನುಗಾರಿಕೆಯನ್ನು ತಮ್ಮ ಜೀವನೋಪಾಯಕ್ಕಾಗಿ ಅವಲಂಬಿಸಿರುವ ಹಲವಾರು ಮೀನುಗಾರರು ಜಿಲ್ಲೆಯಲ್ಲಿರುತ್ತಾರೆ. ಮೀನುಗಾರಿಕೆಯು ದಕ್ಷಿಣ ಕನ್ನಡ ಜಿಲ್ಲೆಯ ಆರ್ಥಿಕ ಪ್ರಗತಿಯಲ್ಲಿ ಮಹತ್ತರ ಪಾತ್ರ ವಹಿಸುತ್ತಿದೆ.

ಮೀನುಗಾರರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಹತ್ತು ಹಲವಾರು ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ. ಅಲ್ಲದೆ, ಮೀನುಗಾರರ ಅಗತ್ಯತೆಗೆ ಅನುಗುಣವಾಗಿ ಹಲವಾರು ಯೋಜನೆಗಳನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಮೀನು ಮಾರಾಟ ಮಹಾಮಂಡಳಿ, ಮಂಗಳೂರು ರವರ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಇದಲ್ಲದೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಸಂಸ್ಥೆಯು ದಕ್ಷಿಣ ಕನ್ನಡ ಜಿಲ್ಲೆಯನ್ನು ಕೇಂದ್ರ ಸ್ಥಾನ ಮಾಡಿಕೊಂಡು ಮೀನುಗಾರರ ಏಳಿಗೆಗಾಗಿ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.

ಪ್ರಸ್ತುತ, ಜಿಲ್ಲೆಯಲ್ಲಿ 57 ಪರ್ಸೀನ್ ದೋಣಿಗಳು, 1327 ಟ್ರಾಲರ್ ದೋಣಿಗಳು, 1501 ಯಾಂತ್ರೀಕೃತ ನಾಡದೋಣಿಗಳು ಮತ್ತು 541 ಯಾಂತ್ರೀಕೃತವಲ್ಲದ ನಾಡ ದೋಣಿಗಳು ಮೀನುಗಾರಿಕೆಯಲ್ಲಿ ಕಾರ್ಯನಿರತವಾಗಿವೆ. 2019-20 ನೇ ಸಾಲಿನಲ್ಲಿ ರೂ.2031.38 ಕೋಟಿ ಮೌಲ್ಯದ 1.80 ಲಕ್ಷ ಟನ್ ಮೀನು ಉತ್ಪಾದನೆಯಾಗಿರುತ್ತದೆ.

ಕರಾವಳಿ ಮೀನುಗಾರಿಕೆ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- 2021-22ನೇ ಸಾಲಿನಿಂದ ಈ ಹಿಂದೆ ಜಾರಿಯಲ್ಲಿದ್ದ ಹಾಗೆಯೇ ರಾಜ್ಯ ಸರ್ಕಾರವು ಯಾಂತ್ರಿಕ ಮೀನುಗಾರಿಕೆಗೆ ಬಳಸುವ ಡೀಸಲ್ ಮೇಲಿನ ರಾಜ್ಯ ಮಾರಾಟ ಕರವನ್ನು ಪೂರ್ಣವಾಗಿ ವಿನಾಯಿತಿಗೊಳಿಸಿದ ಡೀಸಲ್ ನ್ನು ಡೆಲಿವರಿ ಪಾಯಿಂಟ್ ನಲ್ಲಿಯೇ ಯಾಂತ್ರಿಕ ಮೀನುಗಾರಿಕೆ ದೋಣಿಗಳಿಗೆ ಪೂರೈಸಲಾಗುವುದು.

- ನಾಡದೋಣಿಗಳಿಗೆ ಅಗತ್ಯವಾಗಿರುವ ಸೀಮೆಎಣ್ಣೆಯನ್ನು ದೋಣಿಗಳ ಸಂಖ್ಯೆಗೆ ಅನುಗುಣವಾಗಿ ಕೋಟಾ ಬಿಡುಗಡೆ ಮಾಡಲು ಕೇಂದ್ರ ಸರ್ಕಾರದ ಜೊತೆ ಪತ್ರ ವ್ಯವಹರಿಸಲಾಗುತ್ತಿದೆ.

- ರಾಜ್ಯದ ಮೀನುಗಾರರು ಶೇ.2ರ ಮತ್ತು ಶೂನ್ಯ ಬಡ್ಡಿದರದಲ್ಲಿ ವಾಣಿಜ್ಯ ಮತ್ತು ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳಿಂದ 2017-18 ಮತ್ತು 2018-19ನೇ ಸಾಲುಗಳಲ್ಲಿ ಸಾಲ ಪಡೆದ 1040 ಫಲಾನುಭವಿಗಳ ಒಟ್ಟು ಮೊತ್ತ ರೂ.2.50 ಕೋಟಿಗಳನ್ನು ಸಾಲವನ್ನು ಮನ್ನಾ ಮಾಡಲಾಗಿದೆ.

- ಸಮುದ್ರ ತೀರದಲ್ಲಿ ವಾಸಿಸುತ್ತಿರುವ ಮೀನುಗಾರರ ಕುಟುಂಬಗಳಿಗೆ ಮನೆ ಕಟ್ಟಿಕೊಳ್ಳಲು ಸಿ.ಆರ್.ಜೆಡ್. ನಿಯಮಗಳನ್ನು ಸಡಿಲಿಕೆ ಮಾಡಲು ಸಂಬಂಧಪಟ್ಟ ಸಚಿವಾಲಯಗಳ ಜೊತೆ ಚರ್ಚಿಸಲಾಗುವುದು.

- ಮೀನುಗಾರರ ಅಭಿವೃದ್ಧಿಗಾಗಿ ಈಗಾಗಲೇ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಮೀನು ಮಾರಾಟ ಮಹಾಮಂಡಳಿ, ಮಂಗಳೂರು ಇವರು ಮೀನುಗಾರರಿಗೆ ಸಾಲ ಸೌಲಭ್ಯಗಳನ್ನು ನೀಡುತ್ತಿದ್ದಾರೆ.

- ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅವುಗಳು ಶೈತೀಕೃತ ವಾಹನ ಖರೀದಿ, ಶಾಖನಿರೋಧಕ ವಾಹನ ಖರೀದಿ, ಆಳಸಮುದ್ರ ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ, ಸಾಂಪ್ರದಾಯಿಕ ದೋಣಿಗಳ ಖರೀದಿ ಬದಲಿಗೆ ಎಫ್.ಆರ್.ಪಿ. ಬೋಟು ಖರೀದಿಗೆ ಸಹಾಯ, ಪಂಜರ ಮೀನು ಕೃಷಿಗೆ ಸಹಾಯ, ಹಿನ್ನೀರು ಪ್ರದೇಶಗಳಲ್ಲಿ ಬಯೋಫ್ಲಾಕ್ ಕೊಳಗಳ ನಿರ್ಮಾಣಕ್ಕೆ ಸಹಾಯ ಹಾಗೂ ಮಂಜುಗಡ್ಡೆ ಸ್ಥಾವರಗಳ ನಿರ್ಮಾಣಕ್ಕೆ ಸಹಾಯ ಯೋಜನೆಗಳಿಗೆ ಮಂಜೂರಾತಿ ದೊರಕಿದ್ದು, ರೂ.264.53 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 2021-22 ನೇ ಸಾಲಿನಲ್ಲಿ ಸಹ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ಹಾಗೂ ಇದರ ಸವಲತ್ತುಗಳನ್ನು ದಕ್ಷಿಣ ಕನ್ನಡ ಜಿಲ್ಲೆಗೆ ನೀಡಲಾಗುವುದು.

- ಕಿಸಾನ್ ಕ್ರೆಡಿಟ್ ಕಾರ್ಡ್ ಸೌಲಭ್ಯವನ್ನು ರಾಜ್ಯದ ಮೀನುಗಾರರಿಗೂ ವಿಸ್ತರಿಸಲಾಗಿರುತ್ತದೆ. ಕೇಂದ್ರ ಸರ್ಕಾರವು 2018-19 ನೇ ಸಾಲಿನ ಬಜೆಟ್‌ನಲ್ಲಿ ಕಿಸಾನ್ ಕ್ರೆಡಿಟ್ ಕಾರ್ಡ್ ಸೌಲಭ್ಯವನ್ನು ಮೀನುಗಾರಿಕೆ ಮತ್ತು ಪಶುಸಂಗೋಪನೆ ಕೃಷಿಕರಿಗೂ ವಿಸ್ತರಿಸಿರುತ್ತದೆ. ಮೀನು ಕೃಷಿ ವಿಭಾಗಕ್ಕೆ ಸಂಬಂಧಿಸಿದಂತೆ ಸಾಲದ ಮಿತಿಯನ್ನು ಗರಿಷ್ಠ ರೂ.2.80 ಲಕ್ಷಗಳಿಗೆ ಹಾಗೂ ಹಿಡುವಳಿ ಮೀನುಗಾರಿಕೆ ವಿಭಾಗದಲ್ಲಿ ಗರಿಷ್ಠ ರೂ.3.30 ಲಕ್ಷಗಳವರೆಗೆ ನಿಗದಿಪಡಿಸಲಾಗಿದೆ. ಈವರೆಗೆ 368 ಫಲಾನುಭವಿಗಳಿಗೆ ಕಾರ್ಡ್ ವಿತರಿಸಲಾಗಿದ್ದು, ರೂ. 2.90 ಲಕ್ಷಗಳ ಸಾಲವನ್ನು ನೀಡಲಾಗಿದೆ.

- ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ: ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುತ್ತಿದೆ.

- ಮಂಗಳೂರು ಮೀನುಗಾರಿಕೆ ಬಂದರು ರಾಜ್ಯದ ಪ್ರಮುಖ ಮೀನುಗಾರಿಕೆ ಬಂದರಾಗಿರುತ್ತದೆ. ಮಂಗಳೂರು ಮೀನುಗಾರಿಕೆ ದೋಣಿಗಳ ದಟ್ಟಣೆಯನ್ನು ಕಡಿಮೆ ಮಾಡಲು ಮಂಗಳೂರು ತಾಲ್ಲೂಕಿನ ಮೀನುಗಾರಿಕಾ ಬಂದರಿನ 3ನೇ ಹಂತದ ಮೀನುಗಾರಿಕಾ ಬಂದರಿನ ವಿಸ್ತರಣೆ ಕಾಮಗಾರಿಗೆ ಕೇಂದ್ರ ಸರ್ಕಾರದ ನೆರವಿನೊಂದಿಗೆ ರೂ.57.60 ಕೋಟಿಗಳಿಗೆ ಕೈಗೊಳ್ಳಲಾಗಿರುತ್ತದೆ. ಸದರಿ ಕಾಮಗಾರಿಯು ವಿವಿಧ ಕಾರಣಗಳಿಂದಾಗಿ ವಿಳಂಬವಾಗಿದ್ದು, ಕಾಮಗಾರಿ ಗಳನ್ನು ಪೂರ್ಣಗೊಳಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

- ಇದಲ್ಲದೆ, ಕೇಂದ್ರ ಸರ್ಕಾರದ ನೆರವಿನೊಂದಿಗೆ ಕುಳಾಯಿಯಲ್ಲಿ ರೂ.196.51 ಕೋಟಿ ವೆಚ್ಚದಲ್ಲಿ ಸರ್ವ ಋತು ಬಂದರನ್ನು ನಿರ್ಮಿಸಲಾಗುತ್ತಿದೆ. ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

- ಮಂಗಳೂರು ತೋಟ ಬೇಂಗ್ರೆಯಲ್ಲಿ ರೂ.337.00 ಲಕ್ಷಗಳ ವೆಚ್ಚದಲ್ಲಿ ನಾಡ ದೋಣಿಗಳ ತಂಗುದಾಣ ನಿರ್ಮಾಣ ಕಾಮಗಾರಿಯನ್ನು ಆರ್.ಐ.ಡಿ.ಎಫ್. ಯೋಜನೆಯಡಿ ನಿರ್ಮಾಣ ಮಾಡಲಾಗುವುದು.

ಇದಲ್ಲದೆ, 2021-22 ರಲ್ಲಿ ಜಾರಿಗೆ ಬರುವಂತೆ ರಾಜ್ಯಾದ್ಯಂತ ಮೀನು ಸುಲಭವಾಗಿ ಲಭ್ಯವಾಗಲು ರೂ.30.00 ಕೋಟಿ ವೆಚ್ಚದಲ್ಲಿ ರಾಜ್ಯಾದ್ಯಂತ ಮೀನು ಮಾರಾಟ ಘಟಕ ಮತ್ತು ಮೀನು ಖಾದ್ಯಗಳನ್ನು / ಮೀನು ಊಟ ಒದಗಿಸಲು ಮತ್ಸ್ಯದರ್ಶಿನಿಗಳ ಸ್ಥಾಪನೆಯನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಕೈಗೊಳ್ಳಲಾಗುವುದು.

---

ಸಂಖ್ಯೆ: ಪಸಂಮೀ ಇ-95 ಮೀಇಯೋ 2021

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು